ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜ ನಿ : ಸುಮಪ : 2020–21 ದಿನಾಂಕ : 29–08–2020

# ಮಾಧ್ಯಮ ಆಮಂತ್ರಣ

1) ಪ್ಲಾಸ್ಮಾ ದಾನ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಸೈಕಲ್ ಜಾಥ ಉದ್ಘಾಟನೆ :

ಪ್ರವೀಣ್ ಸೂದ್, ಐ.ಪಿ.ಎಸ್.,

ಮಹಾ ನಿರ್ದೇಶಕರು ಮತ್ತು ಮಹಾನಿರೀಕ್ಷಕರು, ಕರ್ನಾಟಕ ರಾಜ್ಯ

ದಿನಾಂಕ: 30–08–2020 ಭಾನುವಾರ, ಬೆಳಿಗ್ಗೆ 07–15 ಗಂಟೆಗೆ

ಸ್ಥಳ: ವಿ.ಪ್ಯಾ. ಸುಲಿವಾನ್ ಪೋಲೀಸ್ ಹಾಕಿ ಕ್ರೀಡಾಂಗಣ, ಅಶೋಕನಗರ, ಬೆಂಗಳೂರು

2) ಗೋವಿಂದರಾಜನಗರದ ಮತಕ್ಷೇತ್ರ ವ್ಯಾಪ್ತಿಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ 128 ರ ನಾಗರಭಾವಿ ವಿವಿಧ ಅಭಿವೃದ್ಧಿ ಉದ್ಘಾಟನಾ ಕಾರ್ಯಕ್ರಮ :

ವಿ. ಸೋಮಣ್ಣ, ವಸತಿ ಸಚಿವರು

ದಿನಾಂಕ : 30–08–2020 ಭಾನುವಾರ, ಸಮಯ: ಸಂಜೆ: 05–00 ಗಂಟೆಗೆ

ಸ್ಥಳ: ಉದ್ಯಾನವನ ಉದ್ಘಾಟನೆ, ಗಾರ್ಡನ್ ವಿಲಾಸ್
ಪಿ.ಯು.ಕಾಲೇಜ್ ಕಟ್ಟಡ, ಗಾರ್ಡನ್ ವಿಲಾಸ್
ಗ್ರಂಥಾಲಯ ಕಟ್ಟಡ, ಟೀಚರ್ಸ್ ಬಡಾವಣೆ

ಉದ್ಯಾನವನ ಉದ್ಘಾಟನೆ, ಟೀಚರ್ಸ್ ಬಡಾವಣೆ
ಭಗತ್ ಸಿಂಗ್ ಉದ್ಯಾನವನ ಉದ್ಘಾಟನೆ, ಚಂದ್ರ ಬಡಾವಣೆ
ಸಮುದಾಯ ಭವನ, ಚಂದ್ರ ಬಡಾವಣೆ
ಬಾಸ್ಕೆಟ್ ಬಾಲ್ ಕ್ರೀಡಾಂಗಣ, ವಿದ್ಯಾಗಿರಿ ಬಡಾವಣೆ

# ಪತ್ರಿಕಾ ಪ್ರಕಟಣೆ

## ವೃತ್ತಿ ತರಬೇತಿಗೆ ಅರ್ಜಿ ಆಹ್ವಾನ

**ಬೆಂಗಳೂರು, ಆಗಸ್ಟ್ 29 (ಕರ್ನಾಟಕ ವಾರ್ತೆ)**

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಪುರುಷ) ಡೈರಿ ವೃತ್ತ, ಹೊಸೂರು ರಸ್ತೆ, ಬೆಂಗಳೂರು –29 ಇಲ್ಲಿ ಆಗಸ್ಟ್ 2020 ನೇ ಸಾಲಿಗೆ ವಿವಿಧ ವೃತ್ತಿಗಳಲ್ಲಿ ತರಬೇತಿಗಾಗಿ ಆನ್‌ಲೈನ್ ಮೂಲಕ ಪ್ರವೇಶ ಪಡೆಯಲು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಗಸ್ಟ್ 31 ರವರೆಗೆ **www.emptrg.kar.nic.in** ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ನೇರವಾಗಿ ಪ್ರಾಚಾರ್ಯರು/ಕಚೇರಿಯನ್ನು ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

## ದಿವಂಗತ ರಾಮಕೃಷ್ಣ ಹೆಗಡೆ ಆದರ್ಶ ವ್ಯಕ್ತಿ : ವಿಶ್ವೇಶ್ವರ ಹೆಗಡೆ ಕಾಗೇರಿ

**ಬೆಂಗಳೂರು, ಆಗಸ್ಟ್ 29 (ಕರ್ನಾಟಕ ವಾರ್ತೆ)**

ಇಂದು ಕನ್ನಡ ನಾಡು ಕಂಡ ಮುತ್ಸದ್ಧಿ ರಾಜಕಾರಣಿ, ಉತ್ತರ ಕನ್ನಡ ಜಿಲ್ಲೆ ಹೆಮ್ಮೆಯ ಪುತ್ರ ಮಾಜಿ ಮುಖ್ಯಮಂತ್ರಿ ದಿವಂಗತ ರಾಮಕೃಷ್ಣ ಹೆಗಡೆ ಅವರ ಜನ್ಮದಿನ.

ಅಪಾರ ಅನುಭವ, ಉತ್ತಮ ವಾಗ್ಮಿ ಸಾಂಸ್ಕೃತಿಕ ಪ್ರಜ್ಞೆಯನ್ನು ಮೂಡಿಸಿಕೊಂಡಿದ್ದ ರಾಮಕೃಷ್ಣ ಹೆಗಡೆಯವರು ತಮ್ಮ ಸ್ವಸಾಮರ್ಥ್ಯದಿಂದಲೇ ರಾಜ್ಯದ ಮುಖ್ಯಮಂತ್ರಿಗಳಾದ ಜನಪರ ಕಾಳಜಿ, ಉತ್ತಮ ಸಾಮಾಜಿಕ ನಿಲುವು ಹೊಂದಿದ್ದ ಅವರು ತಮ್ಮ ಯೋಚನೆಗಳಿಂದಲೇ ಉತ್ತಮ ಯೋಜನೆಗಳನ್ನು ರೂಪಿಸಿ, ಅದನ್ನು ಅನುಷ್ಠಾನಗೊಳಿಸಿ ಜನಪ್ರಿಯತೆಯನ್ನು ಗಳಿಸಿದ್ದರು. ಯಾವ ಒತ್ತಡಕ್ಕೂ ಮಣಿಯದೇ ತಮ್ಮ ನೇರ ನಡೆನುಡಿಯ ಮೂಲಕ ತಾವು ಒಬ್ಬ ಸಮರ್ಥ ರಾಜಕಾರಣಿ ಎಂದು ನಿರೂಪಿಸಿದ್ದರು.

ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ, ಪಠ್ಯಪುಸ್ತಕ, ವಿದ್ಯಾರ್ಥಿಗಳಿಗೆ ರಿಯಾಯಿತಿ ದರದಲ್ಲಿ ಬಸ್‌ಪಾಸ್ ವ್ಯವಸ್ಥೆ ನೀಡುವ ಮೂಲಕ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವನ್ನು ನೀಡಿದ್ದ ಸಮಗ್ರ ಶಿಕ್ಷಣ ನೀತಿಯನ್ನು ರೂಪಿಸಿ ಬಡ ಮಕ್ಕಳೂ ಶಾಲೆಗೆ ಬರುವಂತೆ ಪ್ರೋತ್ಸಾಹಿಸಿ ಅವರ ಶಿಕ್ಷಣ ಪ್ರೀತಿಗೆ ಸಾಕ್ಷಿಯಾಗಿದೆ.

ರಾಜಕೀಯ ಜೀವನದಲ್ಲಿ ಪಾರದರ್ಶಕವಾಗಿರಬೇಕು ಎಂದು ಮನಗಂಡು 1986 ಲೋಕಾಯುಕ್ತ ಕಾನೂನನ್ನು ರೂಪಿಸಿದ್ದರು. ತಮ್ಮವರ ಮೇಲೆ ಆಪಾದನೆಗಳು ಬಂದಾಗ ಕಾನೂನು ತನಿಖೆಗೆ ಆದೇಶಿಸಿ, ತಮ್ಮ ಮೇಲೆಯೇ ದೂರವಾಣಿ ಕದ್ದಾಲಿಕೆಯ ಆರೋಪ ಬಂದಾಗ ರಾಜೀನಾಮೆ ನೀಡಿ ಮಾದರಿ ನಾಯಕರೆನಿಸಿಕೊಂಡರು.

ಕಲೆ, ಸಾಹಿತ್ಯ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಅಪಾರ ಆಸಕ್ತಿ ಹೊಂದಿದ್ದ ರಾಮಕೃಷ್ಣ ಹೆಗಡೆ ಅವರು ಸಿನಿಮಾದಲ್ಲಿಯೂ ನಟಿಸಿದ್ದರು ಹಾಗೂ ಈ ಎಲ್ಲಾ ವಿಷಯಗಳಿಗೂ ರಾಜಕೀಯದಷ್ಟೇ ಪ್ರಾಮುಖ್ಯತೆಯನ್ನು ನೀಡುತ್ತಿದ್ದರು. ಕರ್ನಾಟಕ ವಿಧಾನ ಸಭೆಗೆ ಹಾಗೂ ರಾಜ್ಯ ಸಭೆಗೆ ಆಯ್ಕೆಯಾಗಿ ತಮ್ಮ ಜೀವಿತದ ಕೊನೆಯವರೆಗೂ ನಿರಂತರ ಜನಸೇವೆಯ ಮೂಲಕ ಜನರ ಋಣ ತೀರಿಸಲು ಹಂಬಲಿಸುತ್ತಿದ್ದರು. ಕೇಂದ್ರ ವಾಣಿಜ್ಯ ಮಂತ್ರಿಗಳಾಗಿದ್ದ ಸಂದರ್ಭದಲ್ಲಿ ರಾಜ್ಯದ ರೈತರಿಗೆ ಅನುಕೂಲವಾಗುವಂತಹ ಯೋಜನೆಗಳನ್ನು ರೂಪಿಸಿ ರೈತರ ಮುಖದಲ್ಲಿ ಭರವಸೆಯ ಮಂದಹಾಸ ಮೂಡಿಸಿದ್ದರು.

ಜಿಲ್ಲೆಯಲ್ಲಿ "ತೋಟಗಾರಿಕಾ ನಿಗಮ" ಹುಟ್ಟುಹಾಕಿ ರಾಜ್ಯದಲ್ಲಿ "ರಾಜೀವ್‌ಗಾಂಧಿ ನ್ಯಾಶನಲ್ ಹಾರ್ಟಿಕಲ್ಚರ್ ಬೋರ್ಡ್" ಸ್ಥಾಪಿಸಿ ರೈತರಿಗೆ ಅನುಕೂಲ ಕಲ್ಪಿಸಿದ್ದರು. ಸಹಕಾರ ಕ್ಷೇತ್ರ ಮುಕ್ತವಾಗಿ, ಸ್ವಾಯತ್ತವಾಗಿ ಹಾಗೂ ಸ್ವಾವಲಂಭಿಯಾಗಿ ಕಾರ್ಯನಿರ್ವಹಿಸಬೇಕೆಂದು ಪ್ರತಿಪಾದಿಸಿ ಸಹಕಾರ ಕ್ಷೇತ್ರಕ್ಕೆ ಹೆಚ್ಚಿನ ಒತ್ತನ್ನು ನೀಡಿದ್ದರು.

ತಮ್ಮ ಮಾತು ಮತ್ತು ನಡವಳಿಕೆ ಒಂದೆ ಆಗಿರುವಂತೆ ರಾಜಕೀಯ ಒತ್ತಡಗಳ ನಡುವೆಯೂ ಬದುಕಿ, ಸಾಧಿಸಿ ತೋರಿಸಿದ ರಾಮಕೃಷ್ಣ ಹೆಗಡೆಯವರು ಇಂದಿನ ಹಾಗೂ ಮುಂದಿನ ಪೀಳಿಗೆಗೆ ಓರ್ವ ಆದರ್ಶ ವ್ಯಕ್ತಿಯಾಗಿರುತ್ತಾರೆ. ಅವರ ಬದುಕಿನ ಸದ್ಗುಣಗಳು ಸದಾ ದಾರಿದೀಪವಾಗಿದೆ.

ಅವರ ಜನ್ಮದಿನದ ಈ ಸಂದರ್ಭದಲ್ಲಿ ಅವರ ಸಾರ್ಥಕ ಬದುಕನ್ನು ಸ್ಮರಿಸಿಕೊಳ್ಳುತ್ತಾ ಅವರ ದಿವ್ಯಾತ್ಮಕ್ಕೆ ನನ್ನ ನಮನಗಳನ್ನು ಸಲ್ಲಿಸುತ್ತೇನೆಂದು ಕರ್ನಾಟಕ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ಲಾಸ್ಮಾ ದಾನ : ಸೈಕಲ್ ಜಾಥ

**ಬೆಂಗಳೂರು, ಆಗಸ್ಟ್ 29 (ಕರ್ನಾಟಕ ವಾರ್ತೆ)**

ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಕೋವಿಡ್ –19 ರ ವಿಪತ್ತಿನ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಅಧಿಕಾರಿ/ಸಿಬ್ಬಂದಿಯವರು ಗುಣಮುಖರಾಗಿ ಸೋಂಕಿತರಿಗೆ ಪ್ಲಾಸ್ಮಾ ದಾನ ಮಾಡಿ ಸಮಾಜ ಸೇವಕರಾಗಿದ್ದಾರೆ. ವಿಪತ್ತಿನ ಕರ್ತವ್ಯ ಸಂದರ್ಭದಲ್ಲಿ ಕೋವಿಡ್ ಸೋಂಕಿನಿಂದ ಗುಣಮುಖರಾಗಿರುತ್ತಾರೆ.

ಪ್ಲಾಸ್ಮಾ ದಾನ ಮಾಡಿ ಜೀವ ಉಳಿಸುವ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಸೈಕಲ್ ಜಾಥ ಕಾರ್ಯಕ್ರಮವನ್ನು ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರು, ಕರ್ನಾಟಕ ರಾಜ್ಯ ಬೆಂಗಳೂರು ಇವರು ಆಗಸ್ಟ್ 30 ರಂದು ಬೆಳಿಗ್ಗೆ 7–15 ಗಂಟೆಗೆ ವಿ.ಪ್ಯಾ. ಸುಲಿವಾನ್ ಪೊಲೀಸ್ ಹಾಕಿ ಕ್ರೀಡಾಂಗಣ, ಅಶೋಕನಗರ, ಬೆಂಗಳೂರು ಇಲ್ಲಿ ಉದ್ಘಾಟಿಸಲಿದ್ದಾರೆ. ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಅಲೋಕ್‌ಕುಮಾರ್ ಸಮಾರಂಭದಲ್ಲಿ ಉಪಸ್ಥಿತರಿರುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಮೈಸೂರಿನ ಸುತ್ತೂರು ಮಠ ಕಾರ್ಯ ಶ್ಲಾಘನೀಯ

**ಬೆಂಗಳೂರು, ಆಗಸ್ಟ್ 29 (ಕರ್ನಾಟಕ ವಾರ್ತೆ)**

ಮೈಸೂರಿನ ಸುತ್ತೂರು ಮಠ ಸಮಾಜ ನಿರ್ಮಾಣಕ್ಕೆ ಶ್ರಮಿಸುತ್ತಿದೆ. ಮಠದ ಜನಪರ ಕಾಳಜಿ, ಸಮಾಜಮುಖಿ ಕಾರ್ಯ ಸದಾ ಸ್ಮರಣೀಯ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಇಂದು ಇಲ್ಲಿ ಹೇಳಿದರು.

ಅವರು ಸುತ್ತೂರಿನ ಪರಮಪೂಜ್ಯ ಜಗದ್ಗುರುಗಳಾದ ಡಾ: ಶ್ರೀ ಶಿವರಾತ್ರಿರಾಜೇಂದ್ರಸ್ವಾಮಿಗಳ 105 ನೇ ಜಯಂತಿ ಮಹೋತ್ಸವದ ವರ್ಚುಯಲ್ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿ ದೀನ ದಲಿತರು ಎಂಬ ಭೇದಭಾವವಿಲ್ಲದೆ ದಾಸೋಹ ನಡೆಸಿ ಸಮಾಜ ನಿರ್ಮಾಣಕ್ಕೆ ಶ್ರಮಿಸಿದೆ ಎಂದು ಹೇಳಿದರು.

ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 105ನೆಯ ಜಯಂತಿ ಉತ್ಸವದಲ್ಲಿ ಅತ್ಯಂತ ಸಂತೋಷದಿಂದ ಭಾಗವಹಿಸಿದ್ದೇನೆ.

ಮಹಾನ್ ಸಂತರು, ಮಹರ್ಷಿಗಳು, ತತ್ವಜ್ಞಾನಿಗಳು, ಶರಣರು ದಾಸವೇರಣ್ಯರು ತಮ್ಮ ಬದುಕನ್ನು ಮಾನವನ ಉದ್ಧಾರಕ್ಕಾಗಿ ಮುಡಿಪಾಗಿಸಿ ಮಹಾಬೆಳಕಾದರು.

ಇಂತಹ ಮಹಾನ್ ಸಂತರಲ್ಲಿ ಒಬ್ಬರಾದ ನಮ್ಮ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಲೋಕಕಲ್ಯಾಣಕ್ಕಾಗಿ ಅವಿಸ್ಮರಣೀಯ ಸೇವೆ ಸಲ್ಲಿಸಿದ್ದಾರೆ.

ಕರೋನಾದ ಹಾವಳಿಯಿಂದ ಈ ಬಾರಿ ರಾಜೇಂದ್ರ ಶ್ರೀಗಳ ಜಯಂತಿ ಮಹೋತ್ಸವದಲ್ಲಿ ಆನ್‌ಲೈನ್ ಮೂಲಕ ಪಾಲ್ಗೊಂಡು ಪರಮಪೂಜ್ಯರ ಕೃಪಾಶೀರ್ವಾದಕ್ಕೆ ಪಾತ್ರರಾಗಲು ಇದೊಂದು ಒಳ್ಳೆಯ ವೇದಿಕೆಯಾಗಿದೆ

ಅನ್ನ, ಅರಿವು, ಆರೋಗ್ಯ, ಸಮಾಜ ಸುಧಾರಣೆ, ಧರ್ಮಜಾಗೃತಿ, ಆಧ್ಯಾತ್ಮ ಕ್ಷೇತ್ರದಲ್ಲಿ ಜಗದ್ಗುರುಗಳು ಭದ್ರ ಬುನಾದಿ ಹಾಕಿದ್ದಾರೆ.

ಜೆ.ಎಸ್.ಎಸ್ ಮಹಾವಿದ್ಯಾಪೀಠವನ್ನು ಸ್ಥಾಪಿಸುವ ಮೂಲಕ ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳಿಗೆ ವಸತಿ ಸಹಿತ ಶಿಕ್ಷಣ ನೀಡುವ ಮಹತ್ಕಾರ್ಯವನ್ನು ಮಠದ ವತಿಯಿಂದ ಮಾಡಲಾಗುತ್ತಿದೆ.

ಈ ಸುಸಂದರ್ಭದಲ್ಲಿ ಶ್ರೀಗಳ ಜೀವನ ಮೌಲ್ಯಗಳು ಹಾಗೂ ಶ್ರೀಮಠದ ಸಾಧನೆಗಳನ್ನು ಬಿಂಬಿಸುವ ಕೃತಿಗಳು ಹಾಗೂ ಆನಿಮೇಷನ್ ಚಿತ್ರಗಳನ್ನು ಬಿಡುಗಡೆಗೊಳಿಸುತ್ತಿರುವುದು ಅತ್ಯಂತ ಔಚಿತ್ಯಪೂರ್ಣವಾಗಿದೆ.

ಶ್ರೀಗಳು ಶಾಂತಿ ಹಾಗೂ ಧಾರ್ಮಿಕ ಸಾಮರಸ್ಯದ ರೂವಾರಿಗಳಾಗಿದ್ದು, ಈ ಭಾಗದ ಜನರು ಸೌಹಾರ್ದಯುತವಾಗಿ ಬದುಕಲು ಸ್ಪೂರ್ತಿಯಾಗಿದ್ದಾರೆ.

ಮಠದ ಅನ್ನ ದಾಸೋಹ, ಜ್ಞಾನ ದಾಸೋಹದಂತಹ ಸಮಾಜಮುಖಿ ಕಾರ್ಯಕ್ರಮಗಳು ಶ್ರೀಗಳ ಮಾರ್ಗದರ್ಶನದಲ್ಲಿ ನಿರಂತರವಾಗಿ ನಡೆದುಕೊಂಡು ಬಂದಿರುವುದು ಶ್ಲಾಘನೀಯ.

ಶತಮಾನಗಳಿಂದ ದೀನ ದಲಿತರು ಎಂಬ ಬೇಧಭಾವವಿಲ್ಲದೆ ದಾಸೋಹ ನಡೆಸಿ ಸಮ-ಸಮಾಜದ ನಿರ್ಮಾಣಕ್ಕೆ ಶ್ರೀ ಮಠ ಶ್ರಮಿಸಿದೆ.

ಪರಮಪೂಜ್ಯ ರಾಜೇಂದ್ರ ಶ್ರೀಗಳವರ ಜಯಂತಿ ಮಹೋತ್ಸವದ ಈ ಸಂದರ್ಭದಲ್ಲಿ ವೈವಿಧ್ಯಮಯ ಜನೋಪಯೋಗಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಶ್ರೀಮಠದ ಜನಪರ ಕಾಳಜಿಯ ಪ್ರತೀಕವಾಗಿದೆ.

ಇಂತಹ ಸಮಾಜಮುಖಿ ಕಾರ್ಯಕ್ರಮಗಳು ಇನ್ನೂ ಹೆಚ್ಚು ಹೆಚ್ಚಾಗಿ ನಡೆಯಬೇಕು ಎನ್ನುವುದು ನನ್ನ ಆಶಯ.

ಶ್ರೀಮಠದ ಸಮಾಜ ಕಟ್ಟುವ ಕಾರ್ಯ ನಿರಂತರವಾಗಿ ಮುಂದುವರಿಯಲಿ ಎಂದು ಆಶಿಸಿದರು